**Bangalore**
**Regional News**
**01.05.2026 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಇಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನ : ಶ್ರಮಿಕರ ಶ್ರೇಯೋಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧ - ಕೇಂದ್ರ ಸಚಿವ ಶೋಭಾ ಕರಂದ್ಲಾಜೆ
2. ಸಣ್ಣ ನೀರಾವರಿ ಕ್ಷೇತ್ರದಲ್ಲಿ ವಿಜಯಪುರ ಜಿಲ್ಲೆ ದೇಶಕ್ಕೆ ಮಾದರಿ - ಸಚಿವ ಎನ್.ಎಸ್.ಬೋಸರಾಜು ಸ್ಪಷ್ಟನೆ
3. ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯದ ಮಟ್ಟ ಕುಸಿತ ; ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಅಭಾವ ಸಾಧ್ಯತೆ
4. ನಾಡಿನೆಲ್ಲೆಡೆ ಇಂದು ಬುದ್ಧ ಜಯಂತಿ ; ಗಣ್ಯರಿಂದ ಶುಭಾಶಯ
5. ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಗೆ ನಾಳೆ ತೆರೆ ; ಫೈನಲ್‌ನಲ್ಲಿ ಕುಲ್ಲೇಟಿರ ಮತ್ತು ಚೆಪ್ಪುಡಿರ ತಂಡಗಳು ಸೆಣಸಾಟ

<><><><>

ಇಂದು ಅಂತಾರಾಷ್ಟ್ರೀಯ ಕಾರ್ಮಿಕರ ದಿನ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಲಕ್ಷಾಂತರ ಜನರ ಕಠಿಣ ಪರಿಶ್ರಮದ ಮೇಲೆ ನಮ್ಮ ಪ್ರಗತಿ ನಿರ್ಮಾಣವಾಗಿದೆ. ಈ ದಿನದಂದು ಪ್ರತಿಯೊಬ್ಬ ಕಾರ್ಮಿಕನನ್ನು ಗೌರವಿಸಲಾಗುತ್ತದೆ ಹಾಗೂ ರಕ್ಷಿಸಲಾಗುತ್ತದೆ. ಕಾರ್ಮಿಕರ ಘನತೆ, ನ್ಯಾಯ ಖಚಿತಪಡಿಸಿಕೊಳ್ಳಲು ನಾವು ಬದ್ಧರಾಗಿದ್ದೇವೆ ಎಂದು ತಿಳಿಸಿದ್ದಾರೆ. ಭಿಕ್ಷೆ ಬೇಡುವ ಕೈಗಳಿಗಿಂತ ದುಡಿಯುವ ಕೈಗಳು ಉತ್ತಮ. ಎಲ್ಲಾ ದುಡಿಯುವ ಜನರಿಗೆ ಗೌರವಯುತ ನಮನಗಳು. ರಾಷ್ಟ್ರದ ಪ್ರಗತಿ ಮತ್ತು ಕುಟುಂಬದ ಉನ್ನತಿಗಾಗಿ ಹಗಲಿರುಳು ಶ್ರಮಿಸುವ ಕಾರ್ಮಿಕ ವರ್ಗಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಜಾಲತಾಣದಲ್ಲಿ ಶುಭಾಶಯ ಕೋರಿದ್ದಾರೆ. ದುಡಿಯುವ ವರ್ಗದ ಕೊಡುಗೆ ಹಾಗೂ ತ್ಯಾಗವನ್ನು ಗೌರವಿಸುವ ಸಲುವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಕಾರ್ಮಿಕ ದಿನಾಚರಣೆ ಆಚರಿಸಲಾಯಿತು. ದೊಡ್ಡಬಳ್ಳಾಪುರದ ಕೈಗಾರಿಕಾ ಪ್ರದೇಶದ ವಿವಿಧ ಕಾರ್ಖಾನೆಗಳಲ್ಲಿ ಕಾರ್ಮಿಕರ ದಿನಾಚರಣೆ ಅಂಗವಾಗಿ ಸಿಐಟಿಯು, ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳಿಂದ ಧ್ವಜಾರೋಹಣ ಮಾಡಿ, ಕಾರ್ಮಿಕ ದಿನಾಚರಣೆ ಮಹತ್ವ ಸ್ಮರಿಸಲಾಯಿತು. ಕಾರ್ಮಿಕರ ಪರ ಹೋರಾಟಗಳ ನೆಲ

ದಾವಣಗೆರೆಯಲ್ಲಿಂದು ವಿಶ್ವ ಕಾರ್ಮಿಕರ ದಿನವನ್ನು ಹಲವು ಕಾರ್ಮಿಕ ಸಂಘಟನೆಗಳು ಆಚರಿಸಿದವು. ನಗರದ ಜಯದೇವ ವೃತ್ತದಲ್ಲಿ ಭಾರತೀಯ ಕಮ್ಯುನಿಸ್ಟ್ ಪಕ್ಷದ ನೂರಾರು ಪದಾಧಿಕಾರಿಗಳು ಮತ್ತು ಕಾರ್ಮಿಕರು ಬೃಹತ್ ಮೆರವಣಿಗೆ ನಡೆಸಿ ಸರ್ಕಾರಗಳ ಕಾರ್ಮಿಕರ ವಿರೋಧಿ ಕಾನೂನುಗಳನ್ನು ಖಂಡಿಸಿದರು. ಮತ್ತೊಂದೆಡೆ ಅಖಿಲ ಭಾರತ ಸಂಯುಕ್ತ ಕಾರ್ಮಿಕ ಸಂಘಟನೆಗಳ ವತಿಯಿಂದ ನಗರದ ಕನ್ನಡ ಭವನದಲ್ಲಿ ನಡೆದ ಕಾರ್ಮಿಕ ದಿನಾಚರಣೆಯಲ್ಲಿ ವಿವಿಧ ಬ್ಯಾಂಕ್ ನೌಕರರು ಭಾಗವಹಿಸಿದ್ದರು. ಚಿಕ್ಕಮಗಳೂರು  ನಗರದ ಬೋಳ ರಾಮೇಶ್ವರ ದೇವಾಲಯದ ಅವರಣದಲ್ಲಿ ಇಂದು ವಿವಿಧ ಕಾರ್ಮಿಕ ಸಂಘಟನೆಗಳಿಂದ ಕಾರ್ಮಿಕರ ದಿನ ಆಚರಿಸಲಾಯಿತು. ಕಾರ್ಮಿಕ ದಿಚಾಚರಣೆ ಅಂಗವಾಗಿ ನಡೆದ ಬೈಕ್ ರ್ಯಾಲಿಗೆ ಶಾಸಕ ಹೆಚ್.ಡಿ.ತಮ್ಮಯ್ಯ ಚಾಲನೆ ನೀಡಿದರು.

<><><><>

ದೇಶದಲ್ಲಿ ಇದೇ ಮೊದಲ ಬಾರಿಗೆ ಕಾರ್ಮಿಕರ ೨೯ ಕಾಯ್ದೆಗಳ ತಿದ್ದುಪಡಿ ಮಾಡಿ  ಜಾರಿಗೆ ತರುವ ಪ್ರಯತ್ನ ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಎಲ್ಲಾ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ, ಪಿಂಚಣಿ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಕಾಯ್ದೆ ಜಾರಿಗೆ ತರಲಾಗುತ್ತಿದೆ. ದೇಶದಲ್ಲಿ ಅಸಂಘಟಿತ ಕಾರ್ಮಿಕರು ದೊಡ್ಡ ಪ್ರಮಾಣದಲ್ಲಿದ್ದು, ಕಾರ್ಮಿಕರಿಗೆ ವಿವಿಧ ಸೌಲಭ್ಯಗಳನ್ನು ಒದಗಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಶೋಭಾ ಕರಂದ್ಲಾಜೆ  (೩೯ ಸೆಕೆಂಡ್‌ಗಳು)

ಇದೇ ೩ ರಂದು ದೊಡ್ಡ ಬಳ್ಳಾಪುರದಲ್ಲಿ ಸುಮಾರು ೧೦೦ ಹಾಸಿಗೆಯುಳ್ಳ ಇಎಸ್ಐ ಆಸ್ಪತ್ರೆ ಲೋಕಾರ್ಪಣೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

<><><><>

ವಿಜಯಪುರ  ಜಿಲ್ಲೆಯ ಹಳ್ಳಗಳಿಗೆ ನೀರು ತುಂಬಿಸುವ ಯೋಜನೆ ಸಣ್ಣ ನೀರಾವರಿ ಕ್ಷೇತ್ರದಲ್ಲಿ ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್. ಬೋಸರಾಜು ತಿಳಿಸಿದ್ದಾರೆ. ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ಬರಟಗಿ ಗ್ರಾಮದಲ್ಲಿ ಚೆಕ್ ಡ್ಯಾಂ ಮತ್ತು ಅಂತರ್ಜಲ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಸಚಿವ ಎಂ.ಬಿ.ಪಾಟೀಲ್, ಕೆರೆಗೆ ನೀರು ತುಂಬಿಸುವ ಯೋಜನೆ ರೂಪಿಸಿ, ನೀರಾವರಿ ಸಚಿವರಾಗಿ ಈ ಯೋಜನೆಯನ್ನು ಸಮರ್ಪಕವಾಗಿ ಜಾರಿ ಮಾಡುವ ಮೂಲಕ ಜಿಲ್ಲೆಯಲ್ಲಿ ಜಲಕ್ರಾಂತಿ ಮಾಡಿದ್ದಾರೆ ಎಂದು ಶ್ಲಾಘಿಸಿದ್ದಾರೆ.  ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಮಾತನಾಡಿ, ೧೭೪ ಹಳ್ಳಗಳಿಗೆ ಮಳೆಗಾಲದಲ್ಲಿ ಕಾಲುವೆಗಳ ಮೂಲಕ ನೀರು

ತುಂಬಿಸಲಾಗುವುದು. ಇದರಿಂದ ೪೦೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಅಂತರ್ಜಲ ಹೆಚ್ಚಾಗಲಿದೆ ಎಂದು ತಿಳಿಸಿದ್ದಾರೆ.

<><><><>

ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರದ ನೀರಿನ ಮಟ್ಟ ಬೇಸಿಗೆಯ ಹಿನ್ನೆಲೆಯಲ್ಲಿ ಕೇವಲ ೧೫ ದಿನಗಳಲ್ಲಿ ೮ ಅಡಿ ಕುಸಿದಿದೆ. ಪ್ರಸ್ತುತ ಡ್ಯಾಂನಲ್ಲಿ ೯೨.೯೦ ಅಡಿ ಮಾತ್ರ ನೀರು ಲಭ್ಯವಿದೆ. ೧೨೪.೮೦ ಅಡಿ ಎತ್ತರದ ಅಣೆಕಟ್ಟಿನಲ್ಲಿ ಕೇವಲ ೯೨ ಅಡಿಯಷ್ಟು ಮಾತ್ರ ನೀರಿದ್ದು, ಮುಂಗಾರು ನಿಗದಿತ ಸಮಯಕ್ಕೆ ಆರಂಭವಾಗದಿದ್ದರೆ ಈ ಬಾರಿ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಅಭಾವ ಉಂಟಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ. ಕೆ.ಆರ್.ಎಸ್. ಅಣೆಕಟ್ಟೆಯಿಂದ ಮಂಡ್ಯ, ಮೈಸೂರು, ಬೆಂಗಳೂರು ನಗರಗಳಿಗೆ ನಿತ್ಯ ಕುಡಿಯಲು ೪ ಸಾವಿರದ ೩೭೯ ಕ್ಯೂಸೆಕ್ ನೀರು ಬಳಕೆಯಾಗುತ್ತಿದೆ. ಮಂಡ್ಯ ಜಿಲ್ಲೆಯ ಕೃಷಿ ಬೆಳೆಗಳು ಬೇಸಿಗೆಯಲ್ಲಿ ಒಣಗಬಾರದೆಂದು ನಾಲೆಗಳಿಗೆ ಒಂದು ವಾರದಿಂದ ನೀರು ಹರಿಸಲಾಗುತ್ತಿದೆ. ಜೊತೆಗೆ ತಮಿಳುನಾಡಿಗೂ ನೀರು ಹೋಗುತ್ತಿದೆ. ಅದಾಗಿಯೂ ತಕ್ಷಣಕ್ಕೆ ನೀರಿನ ಸಮಸ್ಯೆ ಇಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಇಂದು ನಾಡಿನೆಲ್ಲೆಡೆ ಬುದ್ಧ ಪೂರ್ಣಿಮೆ ಆಚರಿಸಲಾಗುತ್ತಿದೆ. ಈ ದಿನ ಗೌತಮ ಬುದ್ಧನು ಬಿಹಾರದ ಬೋಧಗಯಾದಲ್ಲಿ ಮಹಾಬೋಧಿ ವೃಕ್ಷದ ಅಡಿಯಲ್ಲಿ ಜ್ಞಾನೋದಯ ಪಡೆದ ದಿನವನ್ನು ಸೂಚಿಸುತ್ತದೆ. ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ  ಸೇರಿದಂತೆ ಹಲವು ಗಣ್ಯರು ದೇಶದ ಜನತೆಗೆ ಬುದ್ಧಪೂರ್ಣಿಮೆಯ ಶುಭಾಶಯ ಕೋರಿದ್ದಾರೆ. ವಿಶ್ವಕ್ಕೆ ಶಾಂತಿ ಹಾಗೂ ಅಹಿಂಸೆಯ ಮಹತ್ವವನ್ನು ಬೋಧಿಸಿದ ಭಗವಾನ್ ಬುದ್ದ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಆಚರಿಸಲಾಯಿತು. ಭಗವಾನ್ ಗೌತಮ ಬುದ್ದ ಅವರು ಇಡೀ ವಿಶ್ವದ ಬೆಳಕು ಎಂದು ಕೊಪ್ಪಳ ಶಾಸಕ  ಕೆ ರಾಘವೇಂದ್ರ ಹಿಟ್ನಾಳ ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಇಂದು ನಡೆದ ಭಗವಾನ್ ಬುದ್ಧ ಜಯಂತಿ ಅಧ್ಯಕ್ಷತೆ  ವಹಿಸಿ ಮಾತನಾಡಿದ ಅವರು, ತಮ್ಮ ಮನೆಯಲ್ಲಿದ್ದ ಸಿರಿ ಸಂಪತ್ತು ತ್ಯಜಿಸಿ ಸರಳ ಬದುಕಿಗೆ ಬಂದ ಬುದ್ಧ ಈ ಜಗತ್ತು ಕಂಡ ಮಹಾಮಹೀಮರಾಗಿದ್ದಾರೆ ಎಂದು ತಿಳಿಸಿದರು. ಸಮಾರಂಭದಲ್ಲಿ ಮಾಜಿ ಸಂಸದ ಕರಡಿ ಸಂಗಣ್ಣ. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಸೇರಿದಂತೆ ಹಲವು ಗಣ್ಯರ ಉಪಸ್ಥಿತರಿದ್ದರು.

<><><><>

ಸರ್ವೋಚ್ಚ ನ್ಯಾಯಾಲಯ ರಾಷ್ಟ್ರದಾದ್ಯಂತ ಮಧ್ಯಸ್ಥಿಕೆ ಆಧಾರಿತ ತೀರ್ಪು ಮತ್ತು ವಿವಾದಗಳ ಸೌಹಾರ್ದಪೂರ್ಣ ಸಮನ್ವಯಕ್ಕಾಗಿ ಸಮಾಧಾನ ಸಮಾರೋಹವನ್ನು ಆಯೋಜನೆ ಮಾಡುತ್ತಿದೆ. ಸರ್ವೋಚ್ಚ ನ್ಯಾಯಾಲಯದಲ್ಲಿ ಧಾರವಾಡ ಜಿಲ್ಲೆಯ ೧೮೮ ಪ್ರಕರಣಗಳು ಬಾಕಿಯಿವೆ ಎಂದು ಹುಬ್ಬಳ್ಳಿ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರು ಹಾಗೂ ಪ್ರಧಾನ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ವೀಣಾ ನಾಯ್ಕರ ತಿಳಿಸಿದ್ದಾರೆ. ಸರ್ವೋಚ್ಚ ನ್ಯಾಯಾಲಯವು ರಾಜ್ಯಕ್ಕೆ ಸಂಬಂಧಪಟ್ಟಂತೆ ಒಟ್ಟು ೪ ಸಾವಿರದ ೩೨೮ ಪ್ರಕರಣಗಳನ್ನು ಪೂರ್ವ ಸಮಾಧಾನ ಪ್ರಕ್ರಿಯೆಗೆ ಗುರುತಿಸಿದೆ. ಬ್ಯಾಂಕಿಂಗ್, ಆಸ್ತಿ ತೆರಿಗೆ, ಕೌಟುಂಬಿಕ ವಿವಾದಗಳು ಸೇರಿದಂತೆ ವಿವಿಧ ಪ್ರಕರಣಗಳನ್ನು ಜಿಲ್ಲಾವಾರು ವಿಂಗಡಿಸಿ, ಎಲ್ಲಾ ಜಿಲ್ಲಾ ಮತ್ತು ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರಗಳಿಗೆ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ. ನ್ಯಾಯಾಲಯದಲ್ಲಿ ಬಾಕಿಯಿರುವ ಸೂಕ್ತ ಪ್ರಕರಣಗಳನ್ನು ಪರಸ್ಪರ ಸೌಹಾರ್ದಯುತವಾಗಿ ಪರಿಹರಿಸುವ ಉದ್ದೇಶವನ್ನು ಈ ಪ್ರಕ್ರಿಯೆ ಹೊಂದಿದೆ. ಸಮಾಧಾನ ಸಮಾರೋಹ ವಿಶೇಷ ಲೋಕ ಅದಾಲತ್‌ಅನ್ನು ೨೦೨೫ರ ಆಗಸ್ಟ್ ೨೧, ೨೨ ಮತ್ತು ೨೩ ರಂದು ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ವೀಣಾ ನಾಯ್ಕರ್ (೨೭ ಸೆಕೆಂಡ್‌ಗಳು)

<><><><>

ಕೊಡಗು ಜಿಲ್ಲೆಯ ನಾಪೋಕ್ಲುವಿನಲ್ಲಿ ಆಯೋಜಿಸಿರುವ ಕೊಡವ ಕೌಟುಂಬಿಕ ೨೫ ನೇ ವರ್ಷದ ಹಾಕಿ ಪಂದ್ಯಾವಳಿ ನಾಳೆ ಸಮಾರೋಪಗೊಳ್ಳಲಿದೆ. ಕಳೆದ ೧ ತಿಂಗಳಿನಿಂದ ನಡೆಯುತ್ತಿರುವ ಹಾಕಿ ಪಂದ್ಯದಲ್ಲಿ ೩೮೨ ಕೊಡವ ಕುಟುಂಬಗಳ ತಂಡಗಳು ಪಾಲ್ಗೊಂಡಿದ್ದವು. ಚೇನಂಡ ಕುಟುಂಬಸ್ಥರು ಆಯೋಜಿಸಿದ್ದ ೨೫ ನೇ ವರ್ಷದ ಹಾಕಿ ಪಂದ್ಯಾವಳಿಯ ಫೈನಲ್ಸ್ ನಲ್ಲಿ ನಾಳೆ ಕುಲ್ಲೇಟಿರ ಮತ್ತು ಚೆಪ್ಪುಡಿರ ತಂಡಗಳು ಪ್ರತಿಷ್ಟಿತ ಕೊಡವ ಹಾಕಿ ಚಾಂಪಿಯನ್ ಟ್ರೋಫಿಗಾಗಿ ಸೆಣಸಲಿದೆ. ನಾಳಿನ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸೂಖ್ ಮಾಂಡವೀಯ ಪಾಲ್ಗೊಳ್ಳಲಿದ್ದಾರೆ ಎಂದು ಕೊಡವ ಹಾಕಿ ಫೆಡರೇಷನ್ ಅಧ್ಯಕ್ಷ ಪಿ.ಕೆ. ಬೋಪಣ್ಣ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>